# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಮೂಲತ: ಕರ್ನಾಟಕ ಗ್ರಾಮೀಣ ಮೂಲ ಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರರಾದ ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ, ಕಾರ್ಯದಳಪತಿ ಗ್ರೇಡ್-2 ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವ್ಯಾಪ್ತಿಗೆ ಗುತ್ತಿಗೆ ಆಧಾರದ ಮೇಲೆ ನೇಮಿಸುವ ಬಗ್ಗೆ - ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 260 ಸೇಶಿಕಾ 2009, ದಿನಾಂಕ. 01-03-2010.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಿಜಾಪುರ ಇವರ ಪತ್ರ ಸಂಖ್ಯೆ. ಜಿಪಂಆ/ಸಿಬ್ಬಂದಿ-1/ಸಿಆರ್-08/2012-13/418, ದಿನಾಂಕ. 13-04-2012.

**ಪ್ರಸ್ತಾವನೆ:**

ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15 (1) (ಬಿ) (ii) ರನ್ವಯ ತಾಂತ್ರಿಕ ವಿದ್ಯಾರ್ಹತೆ ಇರುವ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್), ಕರ್ನಾಟಕ ಗ್ರಾಮೀಣ ಮೂಲ ಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಇವರನ್ನು ಮೇಲೆ ಕ್ರಮ ಸಂಖ್ಯೆ. (1)ರಲ್ಲಿ ಓದಲಾದ ದಿನಾಂಕ. 01-03-2010ರ ಸರ್ಕಾರದ ಆದೇಶದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಇಂಡಿ ಇಲ್ಲಿನ ಸಹಾಯಕ ಇಂಜಿನಿಯರ್ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಿಸಲಾಗಿತ್ತು.

ಬಿಜಾಪುರ ಜಿಲ್ಲೆಯಲ್ಲಿ ಭೀಕರ ಬರಗಾಲವಿದ್ದು, ಇಂಡಿ ತಾಲ್ಲೂಕಿನಲ್ಲಿ ಬರದ ತೀವ್ರತೆ ಅತಿಯಾಗಿದ್ದು, ಇಂಡಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದಲ್ಲಿ ತಾಂತ್ರಿಕ ಸಿಬ್ಬಂದಿಗಳ ಕೊರತೆಯಿರುವುದರಿಂದ ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ, ಸಹಾಯಕ ಇಂಜಿನಿಯರ್ ಇವರ ಗುತ್ತಿಗೆ ಸೇವೆಯನ್ನು ಮುಂದುವರೆಸುವಂತೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 13-04-2012ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಿಜಾಪುರ ಇವರು ಕೋರಿರುತ್ತಾರೆ.

----2

ಕರ್ನಾಟಕ ಗ್ರಾಮೀಣ ಮೂಲ ಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರರಾದ ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್) ಇವರ ಗುತ್ತಿಗೆ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಇಂಡಿ ಇಲ್ಲಿ ಮುಂದುವರೆಸಲು ಸರ್ಕಾರವು ನಿರ್ಧರಿಸಿ ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ. ಗ್ರಾಅಪ 122 ಸೇಶಿಕಾ 2012, ಬೆಂಗಳೂರು, ದಿನಾಂಕ.11-05-2012</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15 (1) (ಬಿ) (ii) ರನ್ವಯ, ಈ ಆದೇಶದೊಂದಿಗೆ ಲಗತ್ತಿಸಿರುವ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು, ಕರ್ನಾಟಕ ಗ್ರಾಮೀಣ ಮೂಲ ಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರರಾದ ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್) ಇವರನ್ನು ಗುತ್ತಿಗೆ ಆಧಾರದ ಮೇಲೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಇಂಡಿ ಇಲ್ಲಿನ ಸಹಾಯಕ ಇಂಜಿನಿಯರ್ ಹುದ್ದೆಗೆ ದಿನಾಂಕ. 17-02-2011ರಿಂದ ಜಾರಿಗೆ ಬರುವಂತೆ ದಿನಾಂಕ. 16-02-2013 ರವರೆಗಿನ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೇ ಅಲ್ಲಿಯವರೆಗೆ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/5/12
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಭೂತ ಸೌಕರ್ಯ ಅಭಿವೃದ್ಧಿ ನಿಯಮಿತ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಿಜಾಪುರ.
8. ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಇಂಡಿ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
10. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಅಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.

## ಗುತ್ತಿಗೆ / ಒಪ್ಪಂದದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು

1. **ಅವಧಿ:** ________________________________________ ಇವರ ಒಪ್ಪಂದದ ನೇಮಕಾತಿಯ ಅವಧಿಯು ದಿನಾಂಕ. ________. ರಿಂದ ದಿನಾಂಕ: __________..ರವರೆಗೆ ಅಥವಾ ಮುಂದಿನ ಆದೇಶ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇರುತ್ತದೆ.

2. **ಗುತ್ತಿಗೆ ನೇಮಕಾತಿಯ ಪ್ರಾರಂಭ ಹಾಗೂ ಅಂತ್ಯ :** ಸದರಿ ಅಧಿಕಾರಿರವರ ಒಪ್ಪಂದದ ನೇಮಕಾತಿಯು ದಿನಾಂಕ. _____________. ರಿಂದ ಪ್ರಾರಂಭಗೊಂಡು ಹುದ್ದೆಯ ಪ್ರಭಾರವನ್ನು ಹಿಂದಕ್ಕೆ ವಹಿಸಿಕೊಟ್ಟ ದಿನಾಂಕದಂದು ಮುಕ್ತಾಯಗೊಳ್ಳುತ್ತದೆ.

3. **ವೇತನ ಮತ್ತು ಇತರೆ ಭತ್ಯೆಗಳು:**________________________________________ ಇವರು ಒಪ್ಪಂದದ ನೇಮಕಾತಿಯ ಅವಧಿಯಲ್ಲಿ ಅವರ ಮಾತೃ ಇಲಾಖೆಯಲ್ಲಿ ಪಡೆಯುತ್ತಿದ್ದ ವೇತನ, ತುಟ್ಟಿಭತ್ಯೆ, ಕಾರ್ಯನಿರ್ವಹಿಸುವ ಸ್ಥಳಕ್ಕೆ ಅನ್ವಯಿಸುವ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಆದರೆ, ನಿಯೋಜನೆಯ ಭತ್ಯೆ ಅನ್ಯ ಸೇವಾ ಭತ್ಯೆ ಅಥವಾ ಇನ್ನಾವುದೇ ಭತ್ಯೆ, ಹೆಚ್ಚಿನ ಕಾಲದ ಭತ್ಯೆ, ಬೋನಸ್, ಅನುಗ್ರಹ ಪೂರ್ವ ಭತ್ಯೆ ಪಡೆಯಲು ಅರ್ಹರಲ್ಲ.

4. **ರಜಾ ನಿಯಮಗಳು:** ಇವರ ಮಾತೃ ಇಲಾಖೆಯಲ್ಲಿನ ರಜಾ ನಿಯಮಗಳಿಗೆ ಅರ್ಹರಿರುತ್ತಾರೆ.

5. **ರಜಾ ವೇತನ ವಂತಿಗೆ :** ಅಧಿಕಾರಿಯವರ ಮೂಲ ವೇತನದ ಶೇಕಡಾ 11 ರಷ್ಟನ್ನು ರಜಾ ವೇತನ ವಂತಿಗೆಯಾಗಿ ಸರ್ಕಾರವು ಪಾವತಿಸುತ್ತದೆ.

6. **ಭವಿಷ್ಯ ನಿಧಿ ವಂತಿಗೆ:** ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇ.12ರಷ್ಟನ್ನು ಸರ್ಕಾರದ ವತಿಯಿಂದ ವಂತಿಗೆ, ಮತ್ತು ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇಕಡಾ 12 ರಷ್ಟನ್ನು ವಂತಿಗೆಯಾಗಿ ತಿಂಗಳಿನ ಸಂಬಳದಲ್ಲಿ ಕಟಾಯಿಸಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರಿಗೆ ಪಾವತಿಸತಕ್ಕದ್ದು.

7. **ಉಪದಾನ ವಂತಿಗೆಗಳು:** ಸರ್ಕಾರವು ಪ್ರತಿ ತಿಂಗಳು 8.33% ರಷ್ಟು ವೇತನ ಮತ್ತು ಅದಕ್ಕೆ ಸಮನಾದ ತುಟ್ಟಿ ಭತ್ಯೆಯೊಂದಿಗೆ ಉಪದಾನ ವಂತಿಗೆಯಾಗಿ ನೀಡುತ್ತದೆ.

8. **ವೈದ್ಯಕೀಯ ರಿಯಾಯಿತಿ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ಅನ್ವಯ ವೈದ್ಯಕೀಯ ವೆಚ್ಚವನ್ನು ಪಡೆಯಲು ಅರ್ಹರಿರುತ್ತಾರೆ.

9. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ __________________________ಹುದ್ದೆಗೆ ನಿಗದಿಪಡಿಸಿರುವ ಕೆಲಸಗಳನ್ನು ಹಾಗೂ ಸರ್ಕಾರವು / ಮೇಲಾಧಿಕಾರಿಗಳು ಕಾಲಕಾಲಕ್ಕೆ ವಹಿಸಿಕೊಡುವ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

----2

10. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.

11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.

12. ______________________ ರವರು ______________ ಹುದ್ದೆಯ ಕೆಲಸ ಕಾರ್ಯಗಳನ್ನು ಶ್ರದ್ಧಾಭಕ್ತಿಯಿಂದ ನಿರ್ವಹಿಸತಕ್ಕದ್ದು ಹಾಗೂ ತಮ್ಮ ಕರ್ತವ್ಯಗಳನ್ನು ನಿರ್ವಹಿಸುವಾಗ ತಿಳಿದು ಬರುವಂತಹ ಕಚೇರಿಯ ಅಧಿಕೃತ ಗೌಪ್ಯ ಮಾಹಿತಿಗಳ ಬಗ್ಗೆ ಕಟ್ಟುನಿಟ್ಟಾಗಿ ಗೌಪ್ಯತೆಯನ್ನು ಕಾಪಾಡತಕ್ಕದ್ದು.

13. ಅಧಿಕಾರಿಯ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾಗುವ ಯಾವುದೇ ನಷ್ಟಗಳನ್ನು ಭರಿಸಿಕೊಡಲು ಅಧಿಕಾರಿಯು ಭಾದ್ಯತೆಯುಳ್ಳವರಾಗಿರುತ್ತಾರೆ.

14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ. 50-00) ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.